# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **460 (539)** |
| **ಸದಸ್ಯರ ಹೆಸರು** | **ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **21-02-2022** |
| **ಉತ್ತರಿಸಬೇಕಾದ ಸಚಿವರು** | **ಉನ್ನತ ಶಿಕ್ಷಣ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ:01-06-1987 ರಿಂದ 31-03-1995 ಅವಧಿಯಲ್ಲಿ ಪ್ರಾರಂಭವಾದ ಒಟ್ಟು 128 ಪದವಿ ಕಾಲೇಜುಗಳ ಪೈಕಿ 93 ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಕಾಲೇಜು ಶಿಕ್ಷಣ ಇಲಾಖೆಯು ಸರ್ಕಾರಕ್ಕೆ ವರದಿ ಸಲ್ಲಿಸಿರುವ ಬಗ್ಗೆ ಯಾವ ಕ್ರಮಕೈಗೊಳ್ಳಲಾಗಿದೆ; | ದಿನಾಂಕ:01.06.1987 ರಿಂದ 01.07.1995ರ ಅವಧಿಯಲ್ಲಿ ಪ್ರಾರಂಭವಾದ ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಒಟ್ಟು 128 ಅನುದಾನರಹಿತ ಕಾಲೇಜುಗಳ ಪೈಕಿ ಇಲಾಖೆಯಲ್ಲಿ ಸ್ವೀಕರಿಸಲಾದ 93 ಕಾಲೇಜುಗಳಿಗೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ದಿನಾಂಕ:01.06.1987 ರಿಂದ 01.07.1995 ರವರೆಗೆ ಪ್ರಾರಂಭವಾದ ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಅನುದಾನರಹಿತ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಪ್ರಸ್ತಾಪಿಸಿರುವ ಎಲ್ಲಾ ಕಾಲೇಜುಗಳನ್ನು ತಪಾಸಣೆ ನಡೆಸಿ ಅವುಗಳ ಮೂಲಸೌಲಭ್ಯಗಳ ವಿವರಗಳು, ಬೋಧಕರ ಸಂಖ್ಯೆಯು ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಇದೆಯೇ? ತರಗತಿ ಕೊಠಡಿಗಳು ಸುಸ್ಥಿತಿಯಲ್ಲಿವೆಯೇ? ಪ್ರತಿ ಕೋರ್ಸಿಗೂ ಮಂಜೂರಾದ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಹಾಗೂ ಹಾಲಿ ಇರುವ ವಿದ್ಯಾರ್ಥಿ ಸಂಖ್ಯೆ ಹಾಗೂ ಫಲಿತಾಂಶಗಳ ಬಗ್ಗೆ ಸಮಿತಿಯನ್ನು ರಚಿಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಆಯುಕ್ತರಿಗೆ ನಿರ್ದೇಶಿಸಲಾಗಿದೆ.<br><br>ಈ ಮಧ್ಯೆ, ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ 2020-21ನೇ ಸಾಲಿನಲ್ಲಿ ಹಾಗೂ ಸರ್ಕಾರದ ಮುಂದಿನ ಆದೇಶದವರೆಗೆ ಯಾವುದೇ ಹೊಸ ಅನುದಾನ ರಹಿತ ವಿದ್ಯಾ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲವೆಂದು ಆರ್ಥಿಕ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020, ದಿನಾಂಕ: 10.06.2020 ರಲ್ಲಿ ತಿಳಿಸಿರುವ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯ ಆದೇಶವನ್ನು ತೆರವುಗೊಳಿಸಿದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು. |
| ಆ) | ಈ ಪದವಿ ಕಾಲೇಜುಗಳು ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಂದಿದ್ದರೂ ಕಾಲೇಜು ಶಿಕ್ಷಣ ಇಲಾಖೆಯ ಶಿಫಾರಸ್ಸಿನ ಮೇರೆಗೆ ಎಂದಿನಿಂದ ಅವುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುವುದು? | |

ಇಡಿ 30 ಯುಪಿಸಿ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು